**Bangalore**
**Regional News**
**10.07.2026 / 18.40 hrs**

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

<u>ಮುಖ್ಯಾಂಶಗಳು</u>

೧. ಬೆಂಗಳೂರಿನ ೬೦ ಸಾವಿರ ಬೀದಿ ವ್ಯಾಪಾರಸ್ಥರಿಗೆ ಗುರುತಿನ ಚೀಟಿ ಮೂಲಕ ಪರ್ಯಾಯ ವ್ಯವಸ್ಥೆ - ಮುಖ್ಯಮಂತ್ರಿ ಭರವಸೆ

೨. ದಸರಾ ಆಚರಣೆಯ ಉನ್ನತ ಮಟ್ಟದ ಸಭೆ; ವ್ಯವಸ್ಥಿತ ರೂಪುರೇಷೆ ಸಿದ್ಧಪಡಿಸಲು ಅಧಿಕಾರಿಗಳಿಗೆ ಸೂಚನೆ

೩. ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಅಕ್ರಮವಾಗಿ ನೆಲೆಸಿದ್ದ ಆರು ಮಂದಿ ಬಾಂಗ್ಲಾ ಪ್ರಜೆಗಳ ಪತ್ತೆ; ವಿದೇಶಿಯರ ಪ್ರಾದೇಶಿಕ ನೋಂದಣಿ ಕಚೇರಿಗೆ ವಿವರ ರವಾನೆ

೪. ಲೋಕಭವನದಲ್ಲಿ ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್‌ನ ವತಿಯಿಂದ ವಿದ್ಯಾರ್ಥಿಗಳಿಗೆ ರಾಜ್ಯ ಪುರಸ್ಕಾರ ಪ್ರದಾನ

**<><*<><>*><>**

ನಾಡಹಬ್ಬ ದಸರಾ - ೨೦೨೬ ಆಚರಣೆಗೆ ಸಂಬಂಧಿಸಿದಂತೆ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ನೇತೃತ್ವದಲ್ಲಿಂದು ವಿಧಾನಸೌಧದಲ್ಲಿ ಉನ್ನತ ಮಟ್ಟದ ಪೂರ್ವಭಾವಿ ಸಭೆ ನಡೆಯಿತು. ದಸರಾ ಮಹೋತ್ಸವವನ್ನು ಯಶಸ್ವಿಯಾಗಿ ಮತ್ತು ವ್ಯವಸ್ಥಿತವಾಗಿ ಆಚರಿಸುವ ಬಗ್ಗೆ ರೂಪುರೇಷೆಗಳನ್ನು ಸಿದ್ಧಪಡಿಸಲು ಸಭೆಯಲ್ಲಿ ಮುಖ್ಯಮಂತ್ರಿಗಳು ಅಧಿಕಾರಿಗಳಿಗೆ ಸೂಚನೆ ನೀಡಿದರು. ರಾಜ್ಯದ ಐತಿಹಾಸಿಕ ಹಾಗೂ ಸಾಂಸ್ಕೃತಿಕ ಪರಂಪರೆಯನ್ನು ಜಗತ್ತಿಗೆ ಪರಿಚಯಿಸುವ ಮಹೋತ್ಸವ ಇದಾಗಿದ್ದು, ಸಂಪ್ರದಾಯಗಳಿಗೆ ಅನುಗುಣವಾಗಿ ಅಂತಾರಾಷ್ಟ್ರೀಯ ಗುಣಮಟ್ಟದಲ್ಲಿ ಕಾರ್ಯಕ್ರಮ ರೂಪಿಸಬೇಕು ಹಾಗೂ ಶಕ್ತಿ ಯೋಜನೆ ಜಾರಿ ಬಳಿಕ ಪ್ರವಾಸಿಗರ ಸಂಖ್ಯೆಯಲ್ಲಿ ಗಣನೀಯ ಏರಿಕೆಯಾಗಿದ್ದು, ಈ ಹಿನ್ನೆಲೆಯಲ್ಲಿ ಅಗತ್ಯ ಮೂಲಸೌಕರ್ಯ ಬಲಪಡಿಸಬೇಕು ಎಂದು ಮುಖ್ಯಮಂತ್ರಿ ನಿರ್ದೇಶನ ನೀಡಿದರು.

**<><*<><>*><>**

ನಾಡಹಬ್ಬ ದಸರಾ - ೨೦೨೬ ಆಚರಣೆಗೆ ಸಂಬಂಧಿಸಿದಂತೆ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ನೇತೃತ್ವದಲ್ಲಿಂದು ವಿಧಾನಸೌಧದಲ್ಲಿ ಉನ್ನತ ಮಟ್ಟದ ಪೂರ್ವಭಾವಿ ಸಭೆ ನಡೆಯಿತು. ದಸರಾ ಮಹೋತ್ಸವವನ್ನು ಯಶಸ್ವಿಯಾಗಿ ಮತ್ತು ವ್ಯವಸ್ಥಿತವಾಗಿ ಆಚರಿಸುವ ಬಗ್ಗೆ ರೂಪುರೇಷೆಗಳನ್ನು ಸಿದ್ಧಪಡಿಸಲು ಸಭೆಯಲ್ಲಿ ಮುಖ್ಯಮಂತ್ರಿಗಳು ಅಧಿಕಾರಿಗಳಿಗೆ ಸೂಚನೆ ನೀಡಿದರು. ರಾಜ್ಯದ ಐತಿಹಾಸಿಕ ಹಾಗೂ ಸಾಂಸ್ಕೃತಿಕ ಪರಂಪರೆಯನ್ನು ಜಗತ್ತಿಗೆ ಪರಿಚಯಿಸುವ ಮಹೋತ್ಸವ ಇದಾಗಿದ್ದು, ಸಂಪ್ರದಾಯಗಳಿಗೆ ಅನುಗುಣವಾಗಿ ಅಂತಾರಾಷ್ಟ್ರೀಯ ಗುಣಮಟ್ಟದಲ್ಲಿ ಕಾರ್ಯಕ್ರಮ ರೂಪಿಸಬೇಕು ಹಾಗೂ ಶಕ್ತಿ ಯೋಜನೆ ಜಾರಿ ಬಳಿಕ ಪ್ರವಾಸಿಗರ ಸಂಖ್ಯೆಯಲ್ಲಿ ಗಣನೀಯ ಏರಿಕೆಯಾಗಿದ್ದು, ಈ ಹಿನ್ನೆಲೆಯಲ್ಲಿ ಅಗತ್ಯ ಮೂಲಸೌಕರ್ಯ ಬಲಪಡಿಸಬೇಕು ಎಂದು ಮುಖ್ಯಮಂತ್ರಿ ನಿರ್ದೇಶನ ನೀಡಿದರು.

<><*<><>*><>

ವಿಜಯಪುರ ಜಿಲ್ಲಾದ್ಯಂತ ಮತದಾರರ ಪಟ್ಟಿ ತೀವ್ರ ವಿಶೇಷ ಪರಿಷ್ಕರಣೆ ತ್ವರಿತಗೊಳಿಸಲು ನಾಳೆ ಮತ್ತು ನಾಡಿದ್ದು ವಿಶೇಷ ಅಭಿಯಾನ ಹಮ್ಮಿಕೊಳ್ಳಲಾಗಿದೆ ಎಂದು ವಿಜಯಪುರ ಜಿಲ್ಲಾ ಚುನಾವಣಾಧಿಕಾರಿ ಜಿಲ್ಲಾಧಿಕಾರಿ ಡಾ. ಆನಂದ ಕೆ. ತಿಳಿಸಿದ್ದಾರೆ. ಈ ವಿಶೇಷ ಅಭಿಯಾನದ ದಿನಗಳಂದು ಜಿಲ್ಲೆಯ ಎಲ್ಲಾ ಮತಗಟ್ಟೆ ಅಧಿಕಾರಿಗಳು ಬೆಳಿಗ್ಗೆ ೮:೩೦ ರಿಂದಲೇ ಕಡ್ಡಾಯವಾಗಿ ಮನೆ-ಮನೆಗೆ ಭೇಟಿ ನೀಡಿ ಎನ್ಯೂಮರೇಷನ್ ಗಣತಿ ನಮೂನೆಗಳನ್ನು ವಿತರಿಸಲಿದ್ದಾರೆ. ಸಾರ್ವಜನಿಕರು ಇದರ ಸದುಪಯೋಗ ಪಡೆದುಕೊಳ್ಳಬೇಕೆಂದು ಜಿಲ್ಲಾಧಿಕಾರಿ ಮನವಿ ಮಾಡಿದ್ದಾರೆ. ಚಿತ್ರದುರ್ಗ ನಗರದ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಕಚೇರಿ ಆವರಣದಲ್ಲಿ ಇಂದು ಮತದಾರರ ಪಟ್ಟಿ ತೀವ್ರ ವಿಶೇಷ ಪರಿಷ್ಕರಣೆ ಕುರಿತು ರಂಗೋಲಿ ಸ್ಪರ್ಧೆಯ ಮೂಲಕ ವಿನೂತನ ಜಾಗೃತಿ ಮೂಡಿಸಲಾಯಿತು. ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಜಿಲ್ಲಾ ಸ್ವೀಪ್ ಸಮಿತಿ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಸಂಯುಕ್ತಾಶ್ರಯದಲ್ಲಿ ಆಯೋಜಿಸಲಾಗಿದ್ದ ಈ ಸ್ಪರ್ಧೆಯಲ್ಲಿ ಅಂಗನವಾಡಿ ಕಾರ್ಯಕರ್ತೆಯರು, ಸಹಾಯಕಿಯರು, ಸ್ವ-ಸಹಾಯ ಗುಂಪಿನ ಮಹಿಳೆಯರು ಹಾಗೂ ಬೂತ್ ಮಟ್ಟದ ಅಧಿಕಾರಿಗಳು ಉತ್ಸಾಹದಿಂದ ಪಾಲ್ಗೊಂಡು ಬಣ್ಣ ಬಣ್ಣದ ರಂಗೋಲಿಗಳ ಮೂಲಕ ಮತದಾನದ ಮಹತ್ವದ ಸಂದೇಶಗಳನ್ನು ಬಿತ್ತರಿಸಿದರು. ರಂಗೋಲಿ ವೀಕ್ಷಿಸಿ, ವಿಜೇತರಿಗೆ ಬಹುಮಾನ ವಿತರಿಸಿದ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ. ಎಸ್. ಆಕಾಶ್ ಅವರು ಮುಂಬರುವ ಚುನಾವಣೆಗಳಲ್ಲಿ ಮತದಾರರ ಪಟ್ಟಿಯಲ್ಲಿ ಹೆಸರಿಲ್ಲ ಎಂಬ ಗೊಂದಲ ತಲೆದೋರದಂತೆ ನಾಗರಿಕರು ಈಗಲೇ ಜಾಗೃತರಾಗಬೇಕು ಎಂದು  ಕರೆ ನೀಡಿದರು. ಭಾರತ ಚುನಾವಣಾ ಆಯೋಗದ ನಿರ್ದೇಶನದಂತೆ ಬಿಎಲ್‌ಒಗಳು ಮನೆ ಮನೆ ಭೇಟಿ ನೀಡಿ ಗಣತಿ ನಮೂನೆಗಳನ್ನು ವಿತರಿಸುತ್ತಿದ್ದು, ಸಾರ್ವಜನಿಕರು ಅಗತ್ಯ ದಾಖಲೆಗಳೊಂದಿಗೆ ನಿಖರ ಮಾಹಿತಿ ಭರ್ತಿ ಮಾಡಿ ತಕ್ಷಣವೇ ಸಲ್ಲಿಸುವ ಮೂಲಕ ಮತದಾರರ ಪಟ್ಟಿಯಲ್ಲಿ ತಮ್ಮ ಹೆಸರನ್ನು ಖಚಿತಪಡಿಸಿಕೊಳ್ಳಬೇಕು ಎಂದು ಅವರು ತಿಳಿಸಿದರು. ಗದಗ ಜಿಲ್ಲೆಯಲ್ಲಿ ನಿನ್ನೆಯವರೆಗೆ ೮೯ಸಾವಿರದ ೬೭೮ ಎನ್ಯುಮರೇಷನ್ ಫಾರ್ಮಗಳನ್ನು ವಿತರಿಸಲಾಗಿದೆ. ೯೬ ಸಾವಿರದ ೭೧೧ ಎನ್ಯುಮರೇಷನ್ ಫಾರ್ಮ ಡಿಜಟಲೀಕರಣಗೊಂಡಿವೆ ಎಂದು ಗದಗ ಜಿಲ್ಲಾಧಿಕಾರಿ ಸಿ.ಎನ್ ಶ್ರೀಧರ ಮಾಹಿತಿ ನೀಡಿದ್ದಾರೆ.  ವಿಜಯನಗರ ಜಿಲ್ಲೆಯಲ್ಲಿ ಮತದಾರರ ಪಟ್ಟಿ ವಿಶೇಷ ಪರಿಷ್ಕರಣೆ  ಪ್ರಕ್ರಿಯೆ ಚುರುಕಿನಿಂದ ಸಾಗುತ್ತಿದ್ದು, ಇನ್ನು ೯೩೦೦ ಫಾರ್ಮ್ ಗಳು ಮಾತ್ರ ವಿತರಣೆಗೆ ಬಾಕಿ ಉಳಿದಿವೆ. ಬಿಎಲ್‌ಒಗಳಿಂದ ರವರೆಗೆ ಮನೆ ಮನೆಗೆ ಭೇಟಿ ನೀಡಿ ಮಾಹಿತಿ ಸಂಗ್ರಹಿಸುವ ಹಾಗೂ ಡಿಜಿಟಲೀಕರಣ ಪ್ರಕ್ರಿಯೆ ನಡೆಯಲಿದೆ ಎಂದು ಜಿಲ್ಲಾಧಿಕಾರಿಗಳಾದ  ಕವಿತಾ ಎಸ್. ಮನ್ನಿಕೇರಿ  ತಿಳಿಸಿದ್ದಾರೆ.

<><*<><>*><>

ದಕ್ಷಿಣ ಕನ್ನಡ ಜಿಲ್ಲೆಯ  ಮಂಗಳೂರು ಸಮೀಪದ ಸುರತ್ಕಲ್ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಅಕ್ರಮವಾಗಿ ನೆಲೆಸಿದ್ದ ಆರು ಮಂದಿ ಬಾಂಗ್ಲಾ ಪ್ರಜೆಗಳನ್ನು ಪೊಲೀಸರು ಪತ್ತೆಹಚ್ಚಿದ್ದಾರೆ.ಇವರು ಕಟ್ಟಡ ನಿರ್ಮಾಣ ಕಾಮಗಾರಿ ಕೆಲಸದಲ್ಲಿ ತಮ್ಮನ್ನು ತೊಡಗಿಸಿಕೊಂಡಿದ್ದರು.  ಪತ್ತೆಯಾದ ಆರು ಮಂದಿಯ ವಿವರಗಳನ್ನು ಮುಂದಿನ ಕ್ರಮಕ್ಕಾಗಿ ವಿದೇಶಿಯರ ಪ್ರಾದೇಶಿಕ ನೋಂದಣಿ ಕಚೇರಿಗೆ ಕಳುಹಿಸಲಾಗಿದೆ ಎಂದು ಮಂಗಳೂರು ನಗರ ಪೊಲೀಸ್ ಆಯುಕ್ತ ಸುಧೀರ್ ಕುಮಾರ್ ರೆಡ್ಡಿ ತಿಳಿಸಿದ್ದಾರೆ. ವಿದೇಶಿಯರ ಪ್ರಾದೇಶಿಕ ನೋಂದಣಿ ಕಚೇರಿ ಅಧಿಕಾರಿಗಳು ಪ್ರಕರಣವನ್ನು ಪರಿಶೀಲಿಸಿ ಸಂಬಂಧಪಟ್ಟವರನ್ನು ವಶಕ್ಕೆ ಪಡೆಯುವ ಕುರಿತು ಆದೇಶ ಹೊರಡಿಸಲಿದ್ದು, ನಂತರ ಅವರನ್ನು

ಭಾರತದಿಂದ ಗಡಿಪಾರು ಮಾಡುವ ಸಂಬಂಧ ಕಾನೂನುಬದ್ಧ ಕ್ರಮ ಕೈಗೊಳ್ಳಲಿದ್ದಾರೆ ಎಂದು ತಿಳಿಸಿದ್ದಾರೆ.

<><*<><>*><>

ಬೆಂಗಳೂರಿನ ಲೋಕಭವನದ ಗಾಜಿನ ಮನೆ ಆವರಣದಲ್ಲಿ ಈ ಸಂಜೆ ಏರ್ಪಡಿಸಲಾಗಿದ್ದ ಸಮಾರಂಭದಲ್ಲಿ ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್‌ನ ರಾಜ್ಯ ಪುರಸ್ಕಾರಗಳನ್ನು ಪ್ರದಾನ ಮಾಡಲಾಯಿತು. ೨೦೨೪ನೇ ಸಾಲಿಗಾಗಿ ೧೦ ಸಾವಿರದ ೧೦೬ ವಿದ್ಯಾರ್ಥಿಗಳಿಗೆ ಚತುರ್ಥ ಚರಣ್ ಕಬ್ಸ್, ಹೀರಕ್ ಪಂಖ್, ಬುಲಬುಲ್ಸ್ ರಾಜ್ಯ ಪುರಸ್ಕಾರಗಳನ್ನು ನೀಡಲಾಯಿತು. ಈ ಸಂದರ್ಭದಲ್ಲಿ ಮಾತನಾಡಿದ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ಯು.ಟಿ. ಖಾದರ್, ಭಾರತದ ಭವಿಷ್ಯ ನಿರ್ಮಿಸುವಲ್ಲಿ ವಿದ್ಯಾರ್ಥಿಗಳ ಪಾತ್ರ ದೊಡ್ಡದು, ವಿದ್ಯಾರ್ಥಿಗಳು ಶಕ್ತಿಯುತರಾದಾಗ ಮಾತ್ರ ದೇಶ ಬಲಿಷ್ಠವಾಗುತ್ತದೆ. ಸ್ಕೌಟ್ಸ್ ಅಂಡ್ ಗೈಡ್ಸ್, ವಿದ್ಯಾರ್ಥಿಗಳಿಗೆ ಜೀವನ ರೂಪಿಸಿಕೊಳ್ಳಲು ಸಹಕಾರಿಯಾಗಿದೆ ಎಂದು ಹೇಳಿದರು. ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್‌ನ ರಾಜ್ಯ ಮುಖ್ಯ ಆಯುಕ್ತ ಡಾ. ಪಿ.ಜಿ.ಆರ್. ಸಿಂಧ್ಯಾ ಮಾತನಾಡಿ, ಪ್ರತಿ ವರ್ಷ ವಾರ್ಷಿಕ ಪುರಸ್ಕಾರ ಪ್ರದಾನ ಸಮಾರಂಭವನ್ನು ಲೋಕಭವನದಲ್ಲಿ ನಡೆಸುತ್ತಿರುವುದು ಹೆಮ್ಮೆಯ ಸಂಗತಿಯಾಗಿದೆ ಎಂದರು. ಸಮಾರಂಭದಲ್ಲಿ ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್‌ನ ರಾಜ್ಯ ಉಪಾಧ್ಯಕ್ಷ ಕೊಂಡಜ್ಜಿ ಷಣ್ಮುಖಪ್ಪ ಸೇರಿದಂತೆ ಹಲವು ಗಣ್ಯರು ಉಪಸ್ಥಿತರಿದ್ದರು.

<><*<><>*><>

ರಾಜ್ಯದ ಜಿಲ್ಲಾ ಪೊಲೀಸ್ ಘಟಕಗಳ ಬಲವರ್ಧನೆಗಾಗಿ ೧೦೭ ಅತ್ಯಾಧುನಿಕ ವಾಹನಗಳ ಸೇವೆಯನ್ನು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ನಾಳೆ ಬೆಂಗಳೂರಿನಲ್ಲಿ ಲೋಕಾರ್ಪಣೆ ಮಾಡಲಿದ್ದಾರೆ. ಜಿಲ್ಲಾ ಪೊಲೀಸ್ ಘಟಕಗಳಿಗೆ ೩೨ ಅತ್ಯಾಧುನಿಕ ಮೊಬೈಲ್ ಫೊರೆನ್ಸಿಕ್ ವ್ಯಾನ್ ಹಾಗೂ ೭೫ ಬೊಲೆರೊ ವಾಹನಗಳನ್ನು ನೀಡಲಾಗುತ್ತಿದ್ದು, ಮುಖ್ಯಮಂತ್ರಿ ಹಸಿರು ನಿಶಾನೆ ಮೂಲಕ ನೂತನ ವಾಹನಗಳಿಗೆ ಚಾಲನೆ ನೀಡಲಿದ್ದಾರೆ.

<><*<><>*><>

ಕೋಲಾರ ಜಿಲೆಯಲ್ಲಿ ಕೃಷಿ ಇಲಾಖೆಯ ವತಿಯಿಂದ ರೈತರಿಗಾಗಿ ೨೦೨೬-೨೭ನೇ ಸಾಲಿನ 'ಬೆಳೆ ವಿಮೆ ಯೋಜನೆ' ಹಾಗೂ 'ಬೆಳೆ ಸಮೀಕ್ಷೆ ಯೋಜನೆ' ಕುರಿತಂತೆ ಜಾಗೃತಿ ಮತ್ತು ಪ್ರಚಾರ ಆಂದೋಲನ ಹಮ್ಮಿಕೊಳ್ಳಲಾಗಿದೆ. ಜಿಲ್ಲಾಧಿಕಾರಿ ಡಾ. ಎಂ. ಆರ್. ರವಿ ಹಾಗೂ ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ. ಪ್ರವೀಣ್. ಪಿ. ಬಾಗೇವಾಡಿ ಈ ಆಂದೋಲನಕ್ಕೆ ಇಂದು ಚಾಲನೆ ನೀಡಿದರು. ಬಳಿಕ ಮಾತನಾಡಿದ ಜಿಲ್ಲಾಧಿಕಾರಿ ಡಾ.ಎಂ.ಆರ್. ರವಿ, ರೈತರಲ್ಲಿ ಬೆಳೆ ವಿಮೆ ಮಾಡಿಸುವ ಮಹತ್ವ, ವಿಮಾ ಕಂತು ಪಾವತಿಸುವ ಕಡೆಯ ದಿನಾಂಕ ಹಾಗೂ ಬೆಳೆ ಸಮೀಕ್ಷೆಯ ನಿಖರತೆಯ ಅಗತ್ಯತೆಯ ಬಗ್ಗೆ ಪ್ರತಿ ಹಳ್ಳಿಯಲ್ಲೂ ಅರಿವು ಮೂಡಿಸಲು ಈ ಆಂದೋಲನವನ್ನು ರೂಪಿಸಲಾಗಿದೆ.ಪ್ರಚಾರ ಆಂದೋಲನ ತಂಡ ಮುಂಬರುವ ದಿನಗಳಲ್ಲಿ ಜಿಲ್ಲೆಯಾದ್ಯಂತ ಸಂಚರಿಸಿ, ರೈತರಿಗೆ ಸಕಾಲದಲ್ಲಿ ಬೆಳೆ ವಿಮೆ ನೋಂದಣಿ ಮಾಡಲು ಮತ್ತು ಸರ್ಕಾರದ ಕೃಷಿ ಯೋಜನೆಗಳ ಸೌಲಭ್ಯವನ್ನು ಯಾವುದೇ ಅಡೆತಡೆಯಿಲ್ಲದೆ ಪಡೆದುಕೊಳ್ಳಲು ಅಗತ್ಯ ಮಾಹಿತಿಯನ್ನು ಒದಗಿಸಲಿದೆ ಎಂದು ತಿಳಿಸಿದರು.

<><*<><>*><>

ಕೇಂದ್ರದ ವಿಬಿ-ಜಿ ರಾಮ್-ಜಿ ಯೋಜನೆಯ ಪರಿಣಾಮಕಾರಿ ಅನುಷ್ಠಾನಕ್ಕಾಗಿ ಬೇಕಾದ ಸಕಲ ಸಿದ್ಧತೆಗಳನ್ನು ಮಾಡಿಕೊಳ್ಳಲಾಗಿದೆ ಎಂದು ಬೆಂಗಳೂರು ಗ್ರಾಮಾಂತರ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ. ವಾಸಂತಿ ಅಮರ್ ತಿಳಿಸಿದ್ದಾರೆ. ಮಾರ್ಗಸೂಚಿಯಂತೆ ದಿನಗೂಲಿಯನ್ನು ೩೭೦ ರೂಪಾಯಿಯಿಂದ ೩೮೨ ರೂಪಾಯಿ ಏರಿಕೆ ಮಾಡಿ ಕೇಂದ್ರ ಹಾಗೂ ರಾಜ್ಯ ಸರ್ಕಾರವು ಜಂಟಿಯಾಗಿ ಆದೇಶ ಹೊರಡಿಸಿದ್ದು, ಪುರುಷ ಮತ್ತು ಮಹಿಳೆಯರಿಗೆ ಸಮಾನ ಕೂಲಿ ಮುಂದುವರೆಯಲಿದೆ. ಹೊಸ ಕಾಯಿದೆಯಡಿ ನಿಯಮಾನುಸಾರ ಎಲ್ಲ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಯೋಜನೆ ಜಾರಿಗೆ ತರಲು ಸೂಚನೆ ನೀಡಲಾಗಿದೆ ಎಂದು ಅವರು ಹೇಳಿದ್ದಾರೆ.

**<><*<><>*><>**

<u>ಸಂಕ್ಷಿಪ್ತ ಸುದ್ದಿ</u>

೧. ಕೇಂದ್ರ ಸಂಸ್ಕೃತಿ ಸಚಿವಾಲಯದ ಸಾಹಿತ್ಯ ಅಕಾದೆಮಿ ಮತ್ತು ಬೆಂಗಳೂರು ಆಕಾಶವಾಣಿ ಸಹಯೋಗದಲ್ಲಿ ಇದೇ ಸೋಮವಾರ ಆಕಾಶವಾಣಿ ಕೇಂದ್ರದಲ್ಲಿ ಸಾಹಿತ್ಯ ವೇದಿಕೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಕವಿ, ವಿಮರ್ಶಕ ಮತ್ತು ನಾಟಕಕಾರ ಎಸ್.ಜಿ. ಸಿದ್ದರಾಮಯ್ಯ ಮುಖ್ಯ ಅತಿಥಿಗಳಾಗಿ ಪಾಲ್ಗೊಳ್ಳಲಿದ್ದಾರೆ.

**<><*<>** ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು **<>*><>**